**All India Radio: Bangalore**
**National Bulletin In Kannada**
**02.10.2026  1.10 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**02.10.2026  1.10 p.m.**

**<><><><>**

ಮುಖ್ಯಾಂಶಗಳು

1. ದೇಶಾದ್ಯಂತ ಗಾಂಧೀಜಯಂತಿ ಆಚರಣೆ; ರಾಜ್‌ಘಾಟ್‌ನಲ್ಲಿ ರಾಷ್ಟ್ರಪಿತರ ಸಮಾಧಿಗೆ ರಾಷ್ಟ್ರಪತಿ ಸೇರಿದಂತೆ ಗಣ್ಯರಿಂದ ಪುಷ್ಪನಮನ
2. ಜಿ-೨೦ ವಾಣಿಜ್ಯ ಸಚಿವರ ಸಭೆ: ಫ್ರಾನ್ಸ್, ಕೆನಡಾ ಸೇರಿ ಹಲವು ರಾಷ್ಟ್ರಗಳ ಸಚಿವರೊಂದಿಗೆ ಕೇಂದ್ರ ಸಚಿವ ಪಿಯೂಷ್ ಗೋಯಲ್ ದ್ವಿಪಕ್ಷೀಯ ಮಾತುಕತೆ
3. ಫ್ಲೈದುಬೈ ವಿಮಾನ ಪ್ರಕರಣ; ಸಮಯಪ್ರಜ್ಞೆ ತೋರಿದ ಪೈಲಟ್ ಸ್ಮಿತ್ ಮಚ್ಚಾರ್ ಅವರೊಂದಿಗೆ ಪ್ರಧಾನಿ ದೂರವಾಣಿ ಮೂಲಕ ಮಾತುಕತೆ
4. ಇದೇ ೫ ರಂದು ಮೂರು ದಿನಗಳ ಭೇಟಿಗಾಗಿ ಸ್ವಿಟ್ಜರ್‌ಲ್ಯಾಂಡ್ ಅಧ್ಯಕ್ಷ ಗೈ ಪಾರ್ಮೆಲಿನ್ ಭಾರತ ಪ್ರವಾಸ
5. ಏಷ್ಯನ್ ಗೇಮ್ಸ್; ಮಹಿಳಾ ಬಾಕ್ಸಿಂಗ್ ಹಾಗೂ ರಿಕರ್ವ್ ಬಿಲ್ಲುಗಾರಿಕೆ ಸ್ಪರ್ಧೆಯಲ್ಲಿ ಭಾರತಕ್ಕೆ ಸ್ವರ್ಣ ಪದಕ

<><><><>

ಮಹಾತ್ಮಗಾಂಧೀಜಿ ಅವರ ೧೫೭ನೇ ಜಯಂತಿ ಹಿನ್ನೆಲೆ ರಾಜ್‌ಘಾಟ್‌ನಲ್ಲಿಂದು ಸೇವಾ ಧರ್ಮ ಪ್ರಾರ್ಥನಾ ಸಭೆ ನಡೆಯಿತು. ರಾಷ್ಟ್ರಪತಿ ದ್ರೌಪದಿ ಮುರ್ಮು ಕಾರ್ಯಕ್ರಮದಲ್ಲಿ ಪಾಲ್ಗೊಂಡು ಗಾಂಧೀಜಿ ಸ್ಮಾರಕಕ್ಕೆ ಪುಷ್ಪನಮನ ಸಲ್ಲಿಸಿದರು. ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್, ಪ್ರಧಾನಿ ನರೇಂದ್ರ ಮೋದಿ ಸೇರಿದಂತೆ ಅನೇಕ ಗಣ್ಯರು ರಾಜ್‌ಘಾಟ್‌ನಲ್ಲಿ ಗಾಂಧೀಜಿ ಅವರ ಸಮಾಧಿಗೆ ಪುಷ್ಪನಮನ ಸಲ್ಲಿಸಿದರು. ಮಹಾತ್ಮ ಗಾಂಧೀಜಿ ಅವರ ಇಡೀ ಜೀವನ, ಸತ್ಯ, ಅಹಿಂಸೆ, ಕರುಣೆ ಮತ್ತು ಸೇವೆಗೆ ದಾರಿದೀಪವಾಗಿದೆ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ತಮ್ಮ ಸಾಮಾಜಿಕ ಜಾಲತಾಣದ ಸಂದೇಶದಲ್ಲಿ ಹೇಳಿದ್ದಾರೆ.

<><><><>

ಗುಜರಾತ್‌ನಲ್ಲಿ ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಅವರ ಜಯಂತಿಯನ್ನು ಇಂದು ವಿವಿಧ ಕಾರ್ಯಕ್ರಮಗಳೊಂದಿಗೆ ಆಚರಿಸಲಾಗುತ್ತಿದೆ. ಪೋರ್‌ಬಂದರ್‌ನಲ್ಲಿರುವ ಗಾಂಧೀಜಿ ಅವರ ಜನ್ಮಸ್ಥಳ ಕೀರ್ತಿ ಮಂದಿರದಲ್ಲಿ ಆಯೋಜಿಸಲಾಗಿರುವ ಪ್ರಾರ್ಥನಾ ಸಭೆಯಲ್ಲಿ ಮುಖ್ಯಮಂತ್ರಿ ಭೂಪೇಂದ್ರ ಪಟೇಲ್ ಭಾಗವಹಿಸುತ್ತಿದ್ದಾರೆ. ಅಹಮದಾಬಾದ್‌ನ ಸಾಬರಮತಿ ಆಶ್ರಮದಲ್ಲೂ ಇಂದು ಸರ್ವಧರ್ಮ ಪ್ರಾರ್ಥನಾ ಸಭೆ ಆಯೋಜಿಸಲಾಗಿದೆ. ರಾಜ್ಯದಾದ್ಯಂತ ಬೃಹತ್ ಸ್ವಚ್ಛತಾ ಅಭಿಯಾನಗಳನ್ನು ಹಮ್ಮಿಕೊಳ್ಳಲಾಗಿದೆ. ಗಾಂಧಿ ಜಯಂತಿ ಅಂಗವಾಗಿ ಖಾದಿ ಮತ್ತು ಪಾಲಿವಸ್ತ್ರ ಉತ್ಪಾದನೆಗೆ ಶೇಕಡ ೩೦ರಷ್ಟು ವಿಶೇಷ ಮಾರುಕಟ್ಟೆ ಪ್ರೋತ್ಸಾಹಧನವನ್ನು ಗುಜರಾತ್ ಸರ್ಕಾರ ಘೋಷಿಸಿದೆ.

<><><><>

ಮಾಜಿ ಪ್ರಧಾನಿ ಲಾಲ್ ಬಹದ್ದೂರ್ ಶಾಸ್ತ್ರಿ ಅವರ ೧೨೨ನೇ ಜಯಂತಿಯನ್ನು ದೇಶಾದ್ಯಂತ ಇಂದು ಆಚರಿಸಲಾಗುತ್ತಿದೆ. ೧೯೦೪ರ ಅಕ್ಟೋಬರ್ ೨ರಂದು ಉತ್ತರ ಪ್ರದೇಶದ ಪಂಡಿತ್ ದೀನ್ ದಯಾಳ್ ಉಪಾಧ್ಯಾಯ ನಗರದಲ್ಲಿ, ಅಂದಿನ ಮುಘಲ್‌ಸರಾಯ್‌ನಲ್ಲಿ ಅವರು ಜನಿಸಿದರು. ಹದಿಹರೆಯದಲ್ಲೇ ಸ್ವಾತಂತ್ರ್ಯ ಹೋರಾಟಕ್ಕೆ ಧುಮುಕಿದ ಶಾಸ್ತ್ರಿ ಅವರು ೧೯೨೧ರ ಅಸಹಕಾರ ಚಳವಳಿಯಲ್ಲಿ ಪಾಲ್ಗೊಂಡಿದ್ದರು. ಸ್ವಾತಂತ್ರ್ಯಾನಂತರ ಉತ್ತರ ಪ್ರದೇಶ ಸರ್ಕಾರದಲ್ಲಿ ಹಾಗೂ ಬಳಿಕ ಕೇಂದ್ರ ಸರ್ಕಾರದಲ್ಲಿ ಹಲವು ಪ್ರಮುಖ ಹುದ್ದೆಗಳನ್ನು ನಿರ್ವಹಿಸಿದ್ದರು. ಇಂದು ಅವರ ಜಯಂತಿ ಅಂಗವಾಗಿ, ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್, ಪ್ರಧಾನಮಂತ್ರಿ ನರೇಂದ್ರ ಮೋದಿ, ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಮತ್ತು ದೆಹಲಿ ಮುಖ್ಯಮಂತ್ರಿ ರೇಖಾ ಗುಪ್ತಾ ಅವರು ಇಂದು ನವದೆಹಲಿಯ ವಿಜಯ್ ಘಾಟ್‌ನಲ್ಲಿರುವ ಲಾಲ್ ಬಹದ್ದೂರ್ ಶಾಸ್ತ್ರಿ ಸ್ಮಾರಕಕ್ಕೆ ತೆರಳಿ ಪುಷ್ಪನಮನ ಸಲ್ಲಿಸಿದರು.

<><><><>

ಅಮೆರಿಕದ ಮಿಲ್ವಾಕಿಯಲ್ಲಿ ನಡೆದ ಜಿ೨೦ ವಾಣಿಜ್ಯ ಸಚಿವರ ಸಭೆಯ ಹಿನ್ನೆಲೆಯಲ್ಲಿ ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್, ಫ್ರಾನ್ಸ್, ಕೆನಡಾ, ಸೌದಿ ಅರೇಬಿಯಾ ಮತ್ತು ದಕ್ಷಿಣ ಕೊರಿಯಾ ರಾಷ್ಟ್ರಗಳ ವಾಣಿಜ್ಯ ಸಚಿವರೊಂದಿಗೆ ಸರಣಿ ದ್ವಿಪಕ್ಷೀಯ ಮಾತುಕತೆ ನಡೆಸಿದರು. ಆಯಾ ದೇಶಗಳೊಂದಿಗೆ ವ್ಯಾಪಾರ ಹಾಗೂ ಹೂಡಿಕೆ ಬಾಂಧವ್ಯವನ್ನು ಮತ್ತಷ್ಟು ಬಲಪಡಿಸುವ ಕುರಿತು ಈ ಪ್ರತ್ಯೇಕ ಸಭೆಗಳಲ್ಲಿ ಪ್ರಮುಖವಾಗಿ ಚರ್ಚಿಸಲಾಯಿತು. ಫ್ರಾನ್ಸ್

ಜೊತೆಗಿನ ಮಾತುಕತೆಯಲ್ಲಿ ಭಾರತ-ಐರೋಪ್ಯ ಒಕ್ಕೂಟ ಮುಕ್ತ ವ್ಯಾಪಾರ ಒಪ್ಪಂದವನ್ನು ಕ್ಷಿಪ್ರಗೊಳಿಸುವುದು, ಬಾಹ್ಯಾಕಾಶ ತಯಾರಿಕೆ, ಯುಪಿಐ ವಿಲೀನ ಹಾಗೂ ಜಂಟಿ ಆವಿಷ್ಕಾರಗಳಿಗೆ ಉತ್ತೇಜನ ನೀಡಲು ನಿರ್ಧರಿಸಲಾಯಿತು. ಕೆನಡಾ ಸಚಿವರೊಂದಿಗೆ ನಡೆದ ಸಭೆಯಲ್ಲಿ ೨೦೩೦ರ ವೇಳೆಗೆ ದ್ವಿಪಕ್ಷೀಯ ವ್ಯಾಪಾರವನ್ನು ೫೦ ಶತಕೋಟಿ ಡಾಲರ್‌ಗೆ ಏರಿಸುವ ಗುರಿಯೊಂದಿಗೆ 'ಸಮಗ್ರ ಆರ್ಥಿಕ ಪಾಲುದಾರಿಕೆ ಒಪ್ಪಂದ' ಪ್ರಕ್ರಿಯೆಯನ್ನು ವೇಗಗೊಳಿಸಲು ಪುನರುಚ್ಚರಿಸಲಾಯಿತು. ಇದಲ್ಲದೆ, ಸೌದಿ ಅರೇಬಿಯಾ ಜೊತೆ ಭಾರತ-ಜಿಸಿಸಿ ಮುಕ್ತ ವ್ಯಾಪಾರ ಒಪ್ಪಂದದ ಪ್ರಗತಿಯನ್ನು ಪರಿಶೀಲಿಸಿದ ಸಚಿವರು, ದಕ್ಷಿಣ ಕೊರಿಯಾ ಸಚಿವರೊಂದಿಗೆ ಭಾರತೀಯ ಕೃಷಿ, ಔಷಧ ಮತ್ತು ಸಾಗರ ಉತ್ಪನ್ನಗಳಿಗೆ ಕೊರಿಯಾ ಮಾರುಕಟ್ಟೆಯಲ್ಲಿ ಹೆಚ್ಚಿನ ಪ್ರವೇಶಾವಕಾಶ ಕಲ್ಪಿಸುವ ಹಾಗೂ ಕೊರಿಯಾದ ತಯಾರಿಕಾ ಹೂಡಿಕೆಯನ್ನು ಭಾರತದಲ್ಲಿ ಹೆಚ್ಚಿಸುವ ಕುರಿತು ವಿಸ್ತೃತವಾಗಿ ಚರ್ಚಿಸಿದರು.

<><><><>

ಫ್ಲೈದುಬೈ ವಿಮಾನದಲ್ಲಿದ್ದ ೧೭೦ ಪ್ರಯಾಣಿಕರ ಪ್ರಾಣ ಉಳಿಸಿದ ಪೈಲಟ್ ಕ್ಯಾಪ್ಟನ್ ಸ್ಮಿತ್ ಮಚ್ಚಾರ್ ಅವರೊಂದಿಗೆ ಪ್ರಧಾನಿ ನರೇಂದ್ರ ಮೋದಿ ದೂರವಾಣಿ ಮೂಲಕ ಮಾತನಾಡಿದ್ದು, ಅವರ ಧೈರ್ಯ ಹಾಗೂ ಸಾಹಸವನ್ನು ಪ್ರಶಂಸಿಸಿದ್ದಾರೆ. ಪ್ರಸ್ತುತ ಯುಎಇ ಆಸ್ಪತ್ರೆಯಲ್ಲಿ ಚೇತರಿಸಿಕೊಳ್ಳುತ್ತಿರುವ ಕ್ಯಾಪ್ಟನ್ ಸ್ಮಿತ್ ಅವರ ಶೀಘ್ರ ಚೇತರಿಕೆಗೆ ಪ್ರಧಾನಿ ಹಾರೈಸಿದ್ದಾರೆ. ಯುಎಇಯಲ್ಲಿರುವ ಭಾರತೀಯ ರಾಯಭಾರಿ ದೀಪಕ್ ಮಿತ್ತಲ್ ಆಸ್ಪತ್ರೆಗೆ ಭೇಟಿ ನೀಡಿ ಮಚ್ಚಾರ್ ಆರೋಗ್ಯ ವಿಚಾರಿಸಿದ್ದು, ಪೈಲಟ್ ಚೇತರಿಸಿಕೊಳ್ಳುತ್ತಿದ್ದಾರೆ ಎಂದು ತಿಳಿಸಿದ್ದಾರೆ. ಕ್ಯಾಪ್ಟನ್ ಸ್ಮಿತ್ ಅವರ ಅಸಾಮಾನ್ಯ ಸಮಯಪ್ರಜ್ಞೆಗೆ ವಿಶ್ವಸಂಸ್ಥೆಯ ಮಹಾನಿರ್ದೇಶಕರು ಸೇರಿದಂತೆ ಜಾಗತಿಕವಾಗಿ ಪ್ರಮುಖರಿಂದ ಅಪಾರ ಮೆಚ್ಚುಗೆ ವ್ಯಕ್ತವಾಗಿದೆ. ಫ್ಲೈದುಬೈ ವಿಮಾನದ ಭಾರತೀಯ ಪೈಲಟ್ ಸ್ಮಿತ್ ಮಚ್ಚಾರ್ ಅವರ ಮೇಲೆ ದಾಳಿ ನಡೆಸಿದ ಆರೋಪ ಎದುರಿಸುತ್ತಿರುವ ಓಮನ್ ಮೂಲದ ಸಹ ಪೈಲಟ್‌ನನ್ನು ಸೌದಿ ಅರೇಬಿಯಾ, ಪ್ರಕರಣದ ಬಗ್ಗೆ ತನಿಖೆ ಮುಂದುವರೆದಿದೆ. ಯುಎಇ ಅಧಿಕಾರಿಗಳಿಗೆ ಹಸ್ತಾಂತರಿಸಿದೆ.

<><><><>

ಸ್ವಿಟ್ಜರ್‌ಲ್ಯಾಂಡ್ ಅಧ್ಯಕ್ಷ ಗೈ ಪಾರ್ಮೆಲಿನ್ ಇದೇ ೫ರಿಂದ ೭ರವರೆಗೆ ಮೂರು ದಿನಗಳ ಭಾರತ ಪ್ರವಾಸ ಕೈಗೊಳ್ಳಲಿದ್ದಾರೆ. ಹಿರಿಯ ಅಧಿಕಾರಿಗಳು ಮತ್ತು ಉದ್ಯಮಿಗಳನ್ನೊಳಗೊಂಡ ಉನ್ನತ

ಮಟ್ಟದ ನಿಯೋಗ ಅವರೊಂದಿಗೆ ಆಗಮಿಸಲಿದೆ. ಪ್ರಧಾನಿ ನರೇಂದ್ರ ಮೋದಿ ಮತ್ತು ಅಧ್ಯಕ್ಷ ಪಾರ್ಮೆಲಿನ್ ದ್ವಿಪಕ್ಷೀಯ ಮಾತುಕತೆ ನಡೆಸಿ, ವ್ಯಾಪಾರ, ಹೂಡಿಕೆ, ವಿಜ್ಞಾನ, ತಂತ್ರಜ್ಞಾನ, ಸಂಸ್ಕೃತಿ ಸೇರಿದಂತೆ ವಿವಿಧ ಕ್ಷೇತ್ರಗಳ ಸಹಕಾರ ಪರಿಶೀಲಿಸಲಿದ್ದಾರೆ. ಪ್ರಾದೇಶಿಕ ಮತ್ತು ಜಾಗತಿಕ ಬೆಳವಣಿಗೆಗಳ ಬಗ್ಗೆಯೂ ಚರ್ಚೆ ನಡೆಯಲಿದೆ. ಅಧ್ಯಕ್ಷ ಪಾರ್ಮೆಲಿನ್ ಅವರು ರಾಷ್ಟ್ರಪತಿ ದ್ರೌಪದಿ ಮುರ್ಮು ಹಾಗೂ ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಅವರನ್ನು ಭೇಟಿ ಮಾಡಲಿದ್ದಾರೆ. ಇದೇ ೭ರಂದು ನಡೆಯಲಿರುವ ಭಾರತ-ಐರೋಪ್ಯ ಮುಕ್ತ ವ್ಯಾಪಾರ ಸಂಘದ ೨ನೇ ಸಮೃದ್ಧಿ ಶೃಂಗಸಭೆಯಲ್ಲೂ ಅವರು ಭಾಗವಹಿಸಲಿದ್ದಾರೆ. ಅವರ ಭೇಟಿ ಭಾರತ-ಸ್ವಿಟ್ಜರ್‌ಲ್ಯಾಂಡ್ ದ್ವಿಪಕ್ಷೀಯ ಸಂಬಂಧ ಮತ್ತು ಹೊಸ ಕ್ಷೇತ್ರಗಳಲ್ಲಿನ ಸಹಕಾರವನ್ನು ಮತ್ತಷ್ಟು ಬಲಪಡಿಸಲಿದೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ.

<><><><>

ಪ್ರಧಾನಿ ನರೇಂದ್ರ ಮೋದಿ ಅವರು ಸಾರ್ವಜನಿಕ ಸೇವೆಯಲ್ಲಿ ೨೫ ವರ್ಷ ಪೂರ್ಣಗೊಳಿಸಿದ ಹಿನ್ನೆಲೆಯಲ್ಲಿ, ದೇಶಾದ್ಯಂತ, ಜನ ಸೇವೆಯಿಂದ ದೇಶ ಸೇವೆ ಎಂಬ ಅಭಿಯಾನ ನಡೆಯುತ್ತಿದೆ. ಸುಶಾಸನದ ದೂರದೃಷ್ಟಿಯೊಂದಿಗೆ ಸರ್ಕಾರ, ೨೦೪೭ರ ವೇಳೆಗೆ 'ವಿಕಸಿತ ಭಾರತ' ಗುರಿ ಸಾಧನೆಯತ್ತ ಸಾಗುತ್ತಿದೆ.  ಅದರ ಭಾಗವಾಗಿ, ಹಲವು ವಲಯಗಳಲ್ಲಿ ಕೈಗೊಂಡ ಮಹತ್ವದ ಸುಧಾರಣೆಗಳ ಕುರಿತ ಸರಣಿಯನ್ನು ಆಕಾಶವಾಣಿ ಪ್ರಸಾರ ಮಾಡುತ್ತಿದೆ. ಇಂದಿನ ಆವೃತ್ತಿಯಲ್ಲಿ ಕೇಂದ್ರ ಸರ್ಕಾರ ಬ್ಯಾಂಕಿಂಗ್ ಕ್ಷೇತ್ರದ ಪುನಶ್ಚೇತನಕ್ಕಾಗಿ ಕೈಗೊಂಡಿರುವ ಕ್ರಮಗಳ ಕುರಿತ ವರದಿ ಇಲ್ಲಿದೆ. ಭಾರತದ ಸಾಲ ಮಾರುಕಟ್ಟೆಯು ಹಿಂದೆ ನೈಜ ಆರ್ಥಿಕ ಬೆಳವಣಿಗೆಗಿಂತ 'ಫೋನ್ ಬ್ಯಾಂಕಿಂಗ್' ಸಂಸ್ಕೃತಿಯಿಂದ ಪ್ರಭಾವಿತಗೊಂಡಿತ್ತು. ಪ್ರಭಾವಿ ಕರೆಗಳ ಮೂಲಕ ಯಾವುದೇ ಪರಿಶೀಲನೆಯಿಲ್ಲದೆ ಬೃಹತ್ ಸಾಲ ನೀಡುವುದು ಹಾಗೂ ನೀಡಿದ ಸಾಲ ವಸೂಲಾಗದಿದ್ದಾಗ, ಅದನ್ನು ಮುಚ್ಚಿಹಾಕಲು ಮತ್ತೆ ಹೆಚ್ಚುವರಿ ಸಾಲ ನೀಡುವ 'ಎವರ್‌ಗ್ರೀನಿಂಗ್' ಅನೈತಿಕ ಅಭ್ಯಾಸವು ಬ್ಯಾಂಕುಗಳ ವಿಶ್ವಾಸಾರ್ಹತೆಯನ್ನು ಕುಸಿಯುವಂತೆ ಮಾಡಿತ್ತು. ಇದಕ್ಕೆ ಅಂತ್ಯಹಾಡಲು ಕೇಂದ್ರ ಸರ್ಕಾರವು 'ಆಸ್ತಿ ಗುಣಮಟ್ಟ ಪರಾಮರ್ಶೆ' ಜಾರಿಗೆ ತಂದಾಗ, ಸಾರ್ವಜನಿಕ ವಲಯದ ಬ್ಯಾಂಕುಗಳಲ್ಲಿದ್ದ ಕೆಟ್ಟ ಸಾಲದ ಪ್ರಮಾಣ, ಶೇಕಡಾ ೧೫ಕ್ಕೇರಿರುವುದು ಬೆಳಕಿಗೆ ಬಂದಿತು. ಇದನ್ನು ಸರಿಪಡಿಸಲು ಸರ್ಕಾರ ತ್ವರಿತ ಪತ್ತೆಹಚ್ಚುವಿಕೆ, ಪರಿಹಾರ, ಮರುಬಂಡವಾಳ ಹೂಡಿಕೆ

ಹಾಗೂ ಸುಧಾರಣೆಗಳನ್ನೊಳಗೊಂಡ '೪-ಆರ್' ತಂತ್ರಜ್ಞಾನ ಮತ್ತು 'ದಿವಾಳಿತನ ಕುರಿತ ಸ್ಪಷ್ಟ ನಿಬಂಧನೆಗಳನ್ನು ಹೊಂದಿರುವ ಕಾಯ್ದೆಯನ್ನು ಜಾರಿಗೆ ತಂದಿತು. ಈ ಸಾಂಸ್ಥಿಕ ಸುಧಾರಣೆಗಳಿಂದ ಬ್ಯಾಂಕುಗಳು ಅನುತ್ಪಾದಕ ಸಾಲಗಳ ಹೊರೆಯನ್ನು ಕಳೆದುಕೊಂಡು, ದೇಶದ ಕ್ಷಿಪ್ರ ಆರ್ಥಿಕ ಪ್ರಗತಿಗೆ ಸಶಕ್ತ ಬೆಂಬಲ ನೀಡಲು ಸಜ್ಜಾಗಿವೆ.

<><><><>

ಜಪಾನ್‌ನ ಐಚಿ-ನಗೋಯಾದಲ್ಲಿ ನಡೆಯುತ್ತಿರುವ ಏಷ್ಯನ್ ಗೇಮ್ಸ್‌ನಲ್ಲಿ ಭಾರತೀಯ ಕ್ರೀಡಾಪಟುಗಳು ಇಂದು ಹಲವು ಪದಕಗಳನ್ನು ಗೆದ್ದಿದ್ದಾರೆ. ಬಾಕ್ಸಿಂಗ್‌ನ ಮಹಿಳೆಯರ ೭೫ ಕೆ.ಜಿ. ವಿಭಾಗದಲ್ಲಿ ಲವ್ಲಿನಾ ಬೊರ್ಗೊಹೇನ್ ಚಿನ್ನದ ಪದಕ ಗೆದ್ದಿದ್ದಾರೆ. ಫೈನಲ್‌ನಲ್ಲಿ ಅವರು ಚೀನಾದ ಬಾವೊ ಝಿಯಿಯನ್ನು ೫-೦ ಅಂತರದಲ್ಲಿ ಸೋಲಿಸಿದರು. ಏಷ್ಯನ್ ಗೇಮ್ಸ್‌ನಲ್ಲಿ ಮಹಿಳೆಯರ ಬಾಕ್ಸಿಂಗ್‌ನಲ್ಲಿ ಭಾರತ ಗೆದ್ದಿರುವ ಎರಡನೇ ಚಿನ್ನದ ಪದಕ ಇದಾಗಿದೆ. ೨೦೧೪ರಲ್ಲಿ ಮೇರಿ ಕೋಮ್ ಸ್ವರ್ಣ ಪದಕ ಗೆದ್ದಿದ್ದರು. ಮಹಿಳೆಯರ ರಿಕರ್ವ್ ಬಿಲ್ಲುಗಾರಿಕೆ ತಂಡ ವಿಭಾಗದಲ್ಲಿ ಅಂಕಿತಾ ಭಕತ್, ಕೀರ್ತಿ ಶರ್ಮಾ ಮತ್ತು ಕುಂಕುಮ್ ಮೊಹೋದ್ ಅವರ ತಂಡ ದಕ್ಷಿಣ ಕೊರಿಯಾವನ್ನು ೫-೩ ಅಂತರದಲ್ಲಿ ಮಣಿಸಿ ಐತಿಹಾಸಿಕ ಚಿನ್ನದ ಪದಕ ಗೆದ್ದಿದೆ. ಮಿಶ್ರ ರಿಕರ್ವ್ ತಂಡ ವಿಭಾಗದಲ್ಲಿ ಕುಂಕುಮ್ ಮೊಹೋಡ್ ಮತ್ತು ಧೀರಜ್ ಬೊಮ್ಮದೇವರ ಜೋಡಿ ಬೆಳ್ಳಿ ಪದಕ ಪಡೆದಿದೆ. ಇನ್ನು ಪುರುಷರ ರಿಕರ್ವ್ ಬಿಲ್ಲುಗಾರಿಕೆ ತಂಡ ಸ್ಪರ್ಧೆಯಲ್ಲಿ ಭಾರತದ ಪುರುಷರ ತಂಡ ಬೆಳ್ಳಿ ಪದಕ ಗೆದ್ದಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>